ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:ಶೈವಿ:170:ಉಚಿತ ಶಿಕ್ಷಣ:2015-16

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-560001.
ದಿನಾಂಕ:23.08.2017.

## ಸುತ್ತೋಲೆ

ವಿಷಯ: ರಾಜ್ಯದಲ್ಲಿ ಬರ ಪರಿಸ್ಥಿತಿಯ ಸಂದರ್ಭದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳ ಶಿಕ್ಷಣ ಶುಲ್ಕ ಮರುಪಾವತಿ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ:ಇಡಿ 31 ವಿವಿಧ 2015 ದಿನಾಂಕ:13.11.2015.
2. ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ಇಡಿ 31 ವಿವಿಧ 2015 ದಿನಾಂಕ:05.04.2016.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 66 ವಿವಿಧ 2016 (ಭಾಗ-1), ದಿನಾಂಕ:24.07.2017.

* * * * * *

ರಾಜ್ಯದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳಿಗೆ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಂತೆ ಸ್ನಾತಕೋತ್ತರ ಪದವಿಯ ಹಂತದವರೆಗೆ ಶಿಕ್ಷಣವನ್ನು ಮುಂದುವರೆಸಲು ಅನುವಾಗುವಂತೆ ಉಚಿತ ಶಿಕ್ಷಣ, ಹಾಸ್ಟೆಲ್ ಸೌಲಭ್ಯ ಅಥವಾ ತತ್ಸಮಾನ ಶಿಕ್ಷಣ ಶುಲ್ಕ ಮತ್ತು ವಸತಿ ವೆಚ್ಚದ ಮರುಪಾವತಿ ಮಾಡುವಂತೆ ಉಲ್ಲೇಖ-(1)ರಲ್ಲಿ ಸರ್ಕಾರವು ಆದೇಶಿಸಿರುತ್ತದೆ.

ಈ ಉದ್ದೇಶಕ್ಕೆ ಸಂಬಂಧಿಸಿದಂತೆ ಭರಿಸಲಾಗುವ ವೆಚ್ಚವನ್ನು ಇಲಾಖೆಗೆ ನಿಗದಿಪಡಿಸಲಾಗುವ ಅನುದಾನದ ಮಿತಿಯಲ್ಲಿಯೇ ಭರಿಸಲು ಪರಿಶೀಲಿಸುವಂತೆ ಉಲ್ಲೇಖ-(2)ರ ಸರ್ಕಾರದ ಸೇರ್ಪಡೆ ಆದೇಶದಲ್ಲಿ ಸೂಚಿಸಲಾಗಿರುತ್ತದೆ.

ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ:19.11.2016 ರ ಸಭೆಯ ನಡವಳಿಯಂತೆ ರಾಜ್ಯದಲ್ಲಿ ಬರ ಪರಿಸ್ಥಿತಿಯ ಸಂದರ್ಭದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳ ಸ್ನಾತಕೋತ್ತರ ಪದವಿ ಹಂತದವರೆಗೆ ರಾಜ್ಯದ ವಿಶ್ವವಿದ್ಯಾಲಯ / ಸರ್ಕಾರಿ / ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಶಿಕ್ಷಣ ಶುಲ್ಕ ಮತ್ತು ವಸತಿ ವೆಚ್ಚವನ್ನು ಸರ್ಕಾರದಿಂದ ಭರಿಸಲು ನಿರ್ಧರಿಸಿ, ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಕೆಲವು ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗಿದ್ದು, ಈ ಮಾರ್ಗಸೂಚಿಗಳನ್ನು ಉನ್ನತ ಶಿಕ್ಷಣ ಇಲಾಖೆಯ ಅಧೀನದಲ್ಲಿನ ಎಲ್ಲಾ ಇಲಾಖೆಗಳು ಅನುಸರಿಸುವಂತೆ ಉಲ್ಲೇಖ-(3)ರಲ್ಲಿ ಸರ್ಕಾರವು ಆದೇಶಿಸಿರುತ್ತದೆ.

ಈ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಬರ ಪರಿಸ್ಥಿತಿಯ ಸಂದರ್ಭದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಅವಲಂಬಿತ ಕುಟುಂಬದ ಸದಸ್ಯರುಗಳಲ್ಲಿ ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯ ಸರ್ಕಾರಿ / ಖಾಸಗಿ ಅನುದಾನಿತ / ಖಾಸಗಿ ಅನುದಾನ ರಹಿತ ಪದವಿ ಕಾಲೇಜುಗಲ್ಲಿ ಪದವಿ / ಸ್ನಾತಕೋತ್ತರ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಶಿಕ್ಷಣ ಶುಲ್ಕ ಮರುಪಾವತಿಸುವ ಸಂಬಂಧ ಪ್ರಾದೇಶಿಕ ಜಂಟಿ ನಿರ್ದೇಶಕರು / ಪ್ರಾಂಶುಪಾಲರುಗಳು ಅನುಸರಿಸಬೇಕಾದ ಮಾನದಂಡಗಳು/ ಮಾರ್ಗಸೂಚಿಗಳನ್ನು ಈ ಕೆಳಕಂಡಂತೆ ನೀಡಲಾಗಿದೆ.

1) ರೈತರು ಆತ್ಮಹತ್ಯೆ ಮಾಡಿಕೊಂಡ ಸಂದರ್ಭದಲ್ಲಿ ಸಾಲದ ಹೊರೆ ಆತ್ಮಹತ್ಯೆಗೆ ಕಾರಣವೆಂಬ ಅಂಶವನ್ನು ಪ್ರತಿ ವಿಭಾಗ ಮಟ್ಟದಲ್ಲಿ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಮಿತಿಯು ದೃಢೀಕರಿಸಿರುವ ದಾಖಲೆಯನ್ನು ಸಲ್ಲಿಸುವುದು.

.....2

2) ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳಿಗೆ ಜಂಟಿ ನಿರ್ದೇಶಕರು ಕೃಷಿ ಇಲಾಖೆ ರವರು ರೈತ ಆತ್ಮಹತ್ಯೆ ಮರಣದ ನಂತರ ಪರಿಹಾರ ನೀಡುವ ಸಂದರ್ಭದಲ್ಲಿ ಸದರಿಯವರ ಕುಟುಂಬಕ್ಕೆ ನೀಡಲಾಗಿರುವ ಪರಿಹಾರ ಮಂಜೂರಾತಿ ಪತ್ರವನ್ನು ಸಲ್ಲಿಸುವುದು.

3) ಗುರುತಿನ ಪುರಾವೆಗಾಗಿ ವಿದ್ಯಾರ್ಥಿಯ ಕಾಲೇಜಿನ ಗುರುತಿನ ಚೀಟಿ ಮತ್ತು ಪೋಷಕರು ಮತ್ತು ವಿದ್ಯಾರ್ಥಿಯ ಸಂಬಂಧವನ್ನು ದೃಢೀಕರಿಸುವ ದಾಖಲೆಯನ್ನು ಆಯಾ ಕಾಲೇಜುಗಳ ಪ್ರಾಂಶುಪಾಲರುಗಳು ದೃಢೀಕರಿಸಿ ಸಲ್ಲಿಸುವುದು.

4) ಖಾಸಗಿ ಅನುದಾನಿತ / ಖಾಸಗಿ ಅನುದಾನ ರಹಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ ಕಾಲೇಜುಗಳಲ್ಲಿ ನಿಗದಿಪಡಿಸಿರುವ ಶುಲ್ಕಕ್ಕೆ ಸಮಾನ ಶುಲ್ಕವನ್ನು ಮಾತ್ರ ಮರುಪಾವತಿಸಲಾಗುವುದು.

5) ಈ ಯೋಜನೆಗೆ ಸಂಬಂಧಿಸಿದಂತೆ ಆಯಾ ಕಾಲೇಜುಗಳ ಪ್ರಾಂಶುಪಾಲರುಗಳು ಮೇಲೆ ಹೇಳಿದ ಕ್ರ.ಸಂ. 1, 2 & 3 ರಲ್ಲಿನ ಎಲ್ಲಾ ಅಗತ್ಯ ದಾಖಲಾತಿಗಳೊಂದಿಗೆ ಪ್ರಸ್ತಾವನೆಯನ್ನು ದ್ವಿಪ್ರತಿಯಲ್ಲಿ ಆಯಾ ವಲಯದ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ಸಲ್ಲಿಸುವುದು.

6) ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಅಂತಹ ಪ್ರಸ್ತಾವನೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ. ಪರಿಶೀಲಿಸಿದ ಮಾಹಿತಿಗಳನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ನಮೂನೆ-1 ರಲ್ಲಿ ಸಿದ್ಧಪಡಿಸಿ. ಈ ನಮೂನೆಯೊಂದಿಗೆ ಎಲ್ಲಾ ಅಗತ್ಯ ದೃಢೀಕೃತ ದಾಖಲಾತಿಗಳನ್ನು ಹಾಗೂ ಶುಲ್ಕ ಮರುಪಾವತಿ ಬಗ್ಗೆ ಸ್ಪಷ್ಟ ಅಭಿಪ್ರಾಯ/ಶಿಫಾರಸ್ಸಿನೊಂದಿಗೆ ಸೂಕ್ತ ಪ್ರಸ್ತಾವನೆಯನ್ನು ಮಾತ್ರ ಕೇಂದ್ರ ಕಛೇರಿಗೆ ಸಲ್ಲಿಸುವುದು ಹಾಗೂ ಅಪೂರ್ಣ ಪ್ರಸ್ತಾವನೆಗಳಿಗೆ ಜಂಟಿ ನಿರ್ದೇಶಕರ ಹಂತದಲ್ಲಿಯೇ ಹಿಂಬರಹ ನೀಡುವುದು.

7) ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಕೇಂದ್ರ ಕಛೇರಿಯ ಹಂತದಲ್ಲಿ ಪರಿಶೀಲಿಸಿ. ಸಂಬಂಧಿಸಿದ ಮೊತ್ತವನ್ನು ಖಜಾನೆ--2 ಮೂಲಕ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರ ಡಿ.ಡಿ.ಓ. ಕೋಡ್‌ಗೆ ಬಿಡುಗಡೆ ಮಾಡಲಾಗುವುದು.

8) ಪ್ರಾದೇಶಿಕ ಜಂಟಿ ನಿರ್ದೇಶಕರು ವಿದ್ಯಾರ್ಥಿಯು ಶುಲ್ಕವನ್ನು ಪಾವತಿಸಿರುವ ಬಗ್ಗೆ ಸಂಬಂಧಿಸಿದ ಕಾಲೇಜುಗಳಿಂದ ಮೂಲ ರಸೀದಿಯನ್ನು ಪಡೆದು. ಪರಿಶೀಲಿಸಿ ಇ-ಪಾವತಿ ಮೂಲಕ ಆ ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಸಂಬಂಧಿಸಿದ ಮೊತ್ತವನ್ನು ಸಂದಾಯ ಮಾಡತಕ್ಕದ್ದು.

9) ಸಂಬಂಧಿಸಿದ ಮೊತ್ತವನ್ನು ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಜಮಾ ಮಾಡಿದ ನಂತರ ಈ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಕೂಡಲೇ ಕೇಂದ್ರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸುವುದು.

ಈ ಮೇಲ್ಕಂಡ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಸರಿಸುವುದು.

**<u>ಕರಡು, ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.</u>**

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ,**

1) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತಜ್ಞಾನ ಅಧಿಕಾರಿ, ಕಾ.ಶಿ.ಆ. ಕಛೇರಿ, ಬೆಂಗಳೂರು-ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
4) ಕಛೇರಿ ಪ್ರತಿ.

## : ನಮೂನೆ–1 :

| ಕ್ರ. ಸಂ. | ಆತ್ಮಹತ್ಯೆ ಮಾಡಿಕೊಂಡ ರೈತನ ಹೆಸರು | ಆತ್ಮಹತ್ಯೆ ಮಾಡಿಕೊಂಡ ಸ್ಥಳ / ಗ್ರಾಮ / ತಾ॥ / ಜಿಲ್ಲೆ. | ಮರಣ ಹೊಂದಿದ ದಿನಾಂಕ | ಆಯಾ ವಿಭಾಗದ ಉಪ–ವಿಭಾಗಾಧಿಕಾರಿಗಳ ದೃಢೀಕರಣದ ಆದೇಶ ಸಂಖ್ಯೆ ಮತ್ತು ದಿನಾಂಕ | ಜಂಟಿ ನಿರ್ದೇಶಕರು, ಕೃಷಿ ಇಲಾಖೆ ಇವರಿಂದ ಪರಿಹಾರ ಮಂಜೂರಾತಿ ಆದೇಶ ಸಂಖ್ಯೆ ಮತ್ತು ದಿನಾಂಕ | ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಯ ಹೆಸರು (ಆತ್ಮಹತ್ಯೆ ಮಾಡಿಕೊಂಡ ರೈತರ ಮಗ/ಮಗಳು) | ವ್ಯಾಸಂಗ ಮಾಡುತ್ತಿರುವ ಪದವಿ/ಸ್ನಾತಕೋತ್ತರ ಕೋರ್ಸ್ | ವ್ಯಾಸಂಗ ಮಾಡುತ್ತಿರುವ ಕಾಲೇಜಿನ ಹೆಸರು & ವಿಳಾಸ | ಕಾಲೇಜು ಆಡಳಿತ ಮಂಡಳಿಯ ವಿಧ (ಸರ್ಕಾರಿ / ಅನುದಾನಿತ / ಅನುದಾನರಹಿತ) | ವಿದ್ಯಾರ್ಥಿಯು ಪಾವತಿಸಿರುವ ಸರ್ಕಾರಿ/ ಅರೆಸರ್ಕಾರಿ ಶುಲ್ಕ (ವಿ.ವಿ. ಶುಲ್ಕ ಹೊರತುಪಡಿಸಿ) | ಮರು ಪಾವತಿಸಬೇಕಾದ ಮೊತ್ತ |
|---|---|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 | 11 | 12 |
| | | | | | | | | | | | |

ಸಹಿ/–
ಪ್ರಾದೇಶಿಕ ಜಂಟಿ ನಿರ್ದೇಶಕರು